# ಕರ್ನಾಟಕ ವಿಧಾನ ಪರಿಷತ್ತು

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ರವರು ನಿಯಮ 330ರಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ.**

*****

**ಸೂಚನೆ: ನಗರ, ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳ ನ್ಯಾಯಾಲಯದ ಕಟ್ಟಡಗಳಲ್ಲಿ ನ್ಯಾಯಾಲಯಕ್ಕೆ ಬರುವ ಕಕ್ಷಿದಾರರು ಹಾಗೂ ಸಾರ್ವಜನಿಕರಿಗೆ ಅಗತ್ಯವಿರುವ ಕುಡಿಯುವ ನೀರು, ಶೌಚಾಲಯ, ಆಸನ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸದೆ ಇರುವುದು, ಲಿಫ್ಟ್ ಸೌಲಭ್ಯದ ಕೊರತೆ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳು ಇಲ್ಲದೆ ಇರುವುದರಿಂದ, ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.**

**ಉತ್ತರ:** ಜಿಲ್ಲಾ ನ್ಯಾಯಾಂಗದಲ್ಲಿ ಕೆಲವು ನ್ಯಾಯಾಲಯ ಸಭಾಂಗಣಗಳು, ನ್ಯಾಯಾಲಯ ಕಟ್ಟಡಗಳು ಮತ್ತು ನ್ಯಾಯಾಂಗ ಅಧಿಕಾರಿಗಳ ವಸತಿ ಗೃಹಗಳ ಅವಶ್ಯಕತೆ ಇದೆ.

ಜಿಲ್ಲಾ ನ್ಯಾಯಾಂಗದ ಎಲ್ಲಾ ನ್ಯಾಯಾಲಯಗಳ ಕಟ್ಟಡಗಳಲ್ಲಿ ಈಗಾಗಲೇ ಶುದ್ಧ ಕುಡಿಯುವ ನೀರಿನ (RO Plant) ವ್ಯವಸ್ಥೆಯನ್ನು ಮಾಡಲಾಗಿದೆ. ನ್ಯಾಯಾಲಯ ಕಟ್ಟಡಗಳ ಪ್ರತಿ ಮಹಡಿಯಲ್ಲಿ ಪುರುಷರು, ಮಹಿಳೆಯರು ಮತ್ತು ದೈಹಿಕ ವಿಕಲಚೇತನರಿಗೆ ಪ್ರತ್ಯೇಕವಾಗಿ ಶೌಚಾಲಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

2-4 ಮಹಡಿಗಳನ್ನು ಹೊಂದಿರುವ ನ್ಯಾಯಾಲಯದ ಕಟ್ಟಡಗಳಿಗೆ ಲಿಫ್ಟ್ ಸೌಲಭ್ಯವನ್ನು ಒದಗಿಸಲಾಗಿದೆ. ಹಾಗೂ ಜಿಲ್ಲಾ ನ್ಯಾಯಾಂಗದ ಎಲ್ಲಾ ನ್ಯಾಯಾಲಯದ ಕಟ್ಟಡಗಳಲ್ಲಿ ಕಕ್ಷಿದಾರರಿಗೆ ಕುರ್ಚಿ ಸೇರಿದಂತೆ ಪೀಠೋಪಕರಣಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಸಂಖ್ಯೆ: ಲಾ-ಎಲ್‌ಎಸಿ/255/2022

**(ಜೆ. ಸಿ. ಮಾಧುಸ್ವಾಮಿ)**
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.